# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

ಸಂಖ್ಯೆ: ಬಿಬಿಎಂಪಿ/ಯವ/ಕೊಉ/ಪಿಆರ್/03/2020-21

ಸಹಾಯಕ ಅಭಿಯಂತರರ ಕಛೇರಿ
ಕೊಡಿಗೇಹಳ್ಳಿ ಉಪವಿಭಾಗ, ಯಲಹಂಕ ವಲಯ
9ನೇ ಅಡ್ಡರಸ್ತೆ, ಡಿ ಬ್ಲಾಕ್
ಸಹಕಾರನಗರ, ಬೆಂಗಳೂರು 560092

ದಿನಾಂಕ: 05.07.2021

**ದಿನಾಂಕ: 05.07.2021 ರಂದು ವಾರ್ಡ್ ಸಮಿತಿಯ ಸಭೆಯ ನಡವಳಿಗಳು:-**

**ಸಭೆಗೆ ಹಾಜರಿದ್ದವರು:**

- ಶ್ರೀ ಗುರು, ಕಾರ್ಯಪಾಲಕ ಅಭಿಯಂತರರು, ನೋಡೆಲ್ ಅಧಿಕಾರಿಗಳು ಹಾಗೂ ಅಧ್ಯಕ್ಷರು ವಾರ್ಡ್ ಸಮಿತಿ.
- ಶ್ರೀ ಪ್ರವೀಣ್ ಎ.ಆರ್., ಕಿರಿಯ ಅಭಿಯಂತರರು ಹಾಗೂ ವಾರ್ಡ್ ಸಮಿತಿ ಕಾರ್ಯದರ್ಶಿ
- ಶ್ರೀ. ಮಂಜುನಾಥ್, ಹಿರಿಯ ಆರೋಗ್ಯ ಪರಿವೀಕ್ಷಕರು, ಅರೋಗ್ಯ
- ಶ್ರೀ. ಡಾ॥ ದಯಾಕರ್ , ಆರೋಗ್ಯ ವೈದ್ಯಾಧಿಕಾರಿ, ಪ್ರಾಥಮಿಕ ಆರೋಗ್ಯ ಕೇಂದ್ರ, ಕೊಡಿಗೇಹಳ್ಳಿ.
- ಶ್ರೀ. ಬಸವರಾಜ್, ಕಂದಾಯ ನಿರೀಕ್ಷಕರು, ವಾರ್ಡ್ ಸಂಖ್ಯೆ:08 ಕೊಡಿಗೇಹಳ್ಳಿ

ವಾರ್ಡ್ ಸಮಿತಿ ಸದಸ್ಯರು

- ಶ್ರೀ ರಾಜು, ಭದ್ರಪ್ಪ ಬಡಾವಣೆ, ಸದಸ್ಯರು
- ಶ್ರೀಮತಿ. ಶಾಂತಕುಮಾರಿ, ಬಾಲಾಜಿ ಬಡಾವಣೆ, ಸದಸ್ಯರು
- ಶ್ರೀ ಶ್ರೀಕಾಂತ್, ಆಮ್ಕೋ ಬಡಾವಣೆ, ಸದಸ್ಯರು
- ಶ್ರೀ ವೆಂಕಟಸ್ವಾಮಿ, ದೇವಿನಗರ, ಸದಸ್ಯರು
- ಶ್ರೀ ಕೃಷ್ಣಕುಮಾರ್ ಸಿ, ಡಿಫೆನ್ಸ್ ಕಾಲೋನಿ ಸದಸ್ಯರು.
- ಶ್ರೀ ವೀರಣ್ಣ, ಎಲ್.ಕೆ.ಆರ್ ಬಡಾವಣೆ ಕಾರ್ಯದರ್ಶಿ, ವಸತಿ ಕ್ಷೇಮಾಭಿವೃದ್ದಿ ಸಂಘ

ವಾರ್ಡ್ ಸಮಿತಿ ಸಭೆಯನ್ನು ವಾರ್ಡ್ ಸಮಿತಿ ಕಾಯದರ್ಶಿಗಳಾದ ಶ್ರೀ. ಪ್ರವೀಣ್ ಎ.ಆರ್. ರವರು ವಾರ್ಡ್ ಸಮಿತಿ ಅಧ್ಯಕ್ಷರು, ವಾರ್ಡ್ ಸಮಿತಿಯ ಸದಸ್ಯರುಗಳು ಹಾಗೂ ಎಲ್ಲಾ ವೃಂದದ ಅಧಿಕಾರಿಗಳನ್ನು ಸ್ವಾಗತಿಸುತ್ತಾ ಸಭೆಯನ್ನು ಪ್ರಾರಂಭಿಸಲಾಯಿತು ಹಾಗೂ ಈ ಹಿಂದಿನ ಸಭೆಯಲ್ಲಿ ಚರ್ಚಿಸಿದ ಸಮಸ್ಯೆಗಳನ್ನು ಪರಿಹರಿಸಲಾಗಿದೆ ಎಂದು ಸಭೆಗೆ ತಿಳಿಸಿದರು.

ನೋಡಲ್ ಅಧಿಕಾರಿ ರವರು ಮಾತನಾಡುತ್ತ ಹಿಂದಿನ ಸಭೆಯ ನಡುವಳಿಗಳ ಬಗ್ಗೆ ಓದಿ ಚರ್ಚಿಸಿ, ಸಮಸ್ಯೆಗಳನ್ನು ಬಗೆಹರಿಸಿರುವ ಕುರಿತು ಹಾಜರಿದ್ದ ಅಧಿಕಾರಿಗಳಿಗೆ ಮತ್ತು ವಸತಿ ಕ್ಷೇಮಾಭಿವೃದಿ ಸಂಘದ ಸದಸ್ಯರುಗಳ ಜೊತೆಗೆ ಚರ್ಚಿಸಿದರು.

ಶ್ರೀಮತಿ. ಶಾಂತಕುಮಾರಿ, ಬಾಲಾಜಿ ಬಡಾವಣೆ, ಸದಸ್ಯರು ಮಾತನಾಡಿ, ಭದ್ರಪ್ಪ ಬಡಾವಣೆಯ 3ನೇ ಅಡ್ಡರಸ್ತೆಯಲ್ಲಿ ಮಳೆ ಬಂದಾಗ ಮಳೆನೀರು ಹರಿವು ಚರಂಡಿಯಲಿ ಹೆಚ್ಚಾಗಿರುವುದರಿಂದ ಮನೆಗಳಿಗೆ ನುಗ್ಗುತ್ತಿರುವುದು ಕಂಡುಬಂದಿದ್ದು UGD Line ಮಾಡಿಕೊಡಬೇಕೆಂದು ಸಭೆಯಲ್ಲಿ ಮನವಿ ಮಾಡಿದರು.

ಈ ಕುರಿತು ನೋಡಲ್ ಅಧಿಕಾರಿಗಳು ಮಾತನಾಡಿ ಸಮಸ್ಯೆಯನ್ನು ಬಗೆಹರಿಸಲು ಶ್ರೀ ಪ್ರವೀಣ್ ರವರಿಗೆ ಸೂಚಿಸಿದರು. ನಂತರ ಶ್ರೀ ಪ್ರವೀಣ್, ಕಿರಿಯ ಅಭಿಯಂತರರು ಮಾತನಾಡಿ UGD Line ಸಮಸ್ಯೆಯನ್ನು ಬೆಂಗಳೂರು ನಗರ ನೀರು ಸರಬರಾಜು ಮತ್ತು ಒಳಚರಂಡಿ ಮಂಡಳಿ ರವರಿಗೆ ತಿಳಿಸಲಾಗುವುದು ಎಂದು ಸಭೆಗೆ ತಿಳಿಸಿದರು.

ಶ್ರೀ ವೀರಣ್ಣ, ಎಲ್.ಕೆ.ಆರ್ ಬಡಾವಣೆ ಕಾರ್ಯದರ್ಶಿ ಮಾತನಾಡಿ, ಚರಂಡಿಯಲ್ಲಿ ಸಿಲ್ಟ್ ತುಂಬಿರುವುದರಿಂದ ನೀರಿನ ಹರಿವು ಸಾರಾಗವಾಗಿ ಹರಿಯದೆ ಸ್ಥಗಿತವಾಗಿರುತ್ತದೆ. ಇದರಿಂದ ಸಾರ್ವಜನಿಕರಿಗೆ ಬಹಳ ತೊಂದರೆಯನ್ನುಂಟು ಮಾಡುತ್ತಿದೆ ಎಂದು ಸಭೆಯಲ್ಲಿ ಮನವಿ ಮಾಡಿದರು.

ಈ ಕುರಿತು ನೋಡಲ್ ಅಧಿಕಾರಿಗಳು ಮಾತನಾಡಿ ಸಿಲ್ಟ್ ಮತ್ತು ಟ್ರಾಕ್ಟರ್ ಬಿಟ್ಟು ಸಮಸ್ಯೆಯನ್ನು ಬಗೆಹರಿಸಲು ಶ್ರೀ ಪ್ರವೀಣ್ ರವರಿಗೆ ಸೂಚಿಸಿದರು. ನಂತರ ಶ್ರೀ ಪ್ರವೀಣ್, ಕಿರಿಯ ಅಭಿಯಂತರರು ಮಾತನಾಡಿ ಸದರಿ ಸಿಲ್ಟ್ ಮಣ್ಣನ್ನು ತೆಗೆದು ಡಂಪಿಂಗ್ ಯಾರ್ಡ್‌ಗೆ ಸ್ಥಳಾಂತರಿಸಲಾಗುವುದು ಎಂದು ಸಭೆಗೆ ತಿಳಿಸಿದರು.

ಶ್ರೀ ಕೃಷ್ಣಕುಮಾರ್ ಸಿ, ಡಿಫೆನ್ಸ್ ಕಾಲೋನಿ ಸದಸ್ಯರು ಮಾತನಾಡಿ ಸದರ ಬಡಾವಣೆಯ 6ನೇ ಮುಖ್ಯರಸ್ತೆಯ 8ನೇ ಅಡ್ಡರಸ್ತೆಯಲ್ಲಿ ಎಲೆಗಳು ರಸ್ತೆಯಿಂದ ತೆಗೆದಿರುವುದಿಲ್ಲ. ಇದರಿಂದ ರಸ್ತೆಯಲ್ಲಿ ವಾಕಿಂಗ್ ಮಾಡಲು ಕಷ್ಟವಾಗುತ್ತಿದ್ದು ಸಾರ್ವಜನಿಕರಿಗೆ ಸಮಸ್ಯೆ ಉಂಟಾಗುತ್ತಿದೆ ಹಾಗೂ ಸದರಿ ಬಡಾವಣೆಯಲ್ಲಿ ಸರ್ಕಾರಿ ರಸ್ತೆಗೆ ಖಾಸಗಿ ಸ್ವತ್ತಿನವರು ಗೇಟ್ ನಿರ್ಮಿಸಿರುವುದಾಗಿ ಸಭೆಗೆ ತಿಳಿಸಿದರು. ಸಹಕಾರನಗರ ಪಾರ್ಕ್ ಪಕ್ಕದಲ್ಲಿರುವ ಹಾಪ್‌ಕಾಮ್ಸ್ ರವರು ಫುಟ್‌ಪಾತ್ ಒತ್ತುವರಿ ಮಾಡಿಕೊಂಡು ಸಾರ್ವಜನಿಕರಿಗೆ ತೊಂದರೆಯನ್ನುಂಟು ಮಾಡುತ್ತಿರುವುದಾಗಿ ಸಭೆಗೆ ತಿಳಿಸಿದರು.

ಈ ಕುರಿತು ನೋಡಲ್ ಅಧಿಕಾರಿಯವರು ಮಾತನಾಡಿ ಶ್ರೀಮತಿ. ಕವಿತಾ, ಕಿರಿಯ ಆರೋಗ್ಯ ಪರಿವೀಕ್ಷಕರು ರವರಿಗೆ ಸಮಸ್ಯೆಯನ್ನು ಬಗೆಹರಿಸಿಕೊಡಬೇಕೆಂದು ಸೂಚಿಸಿದರು ಹಾಗೂ ಕಂದಾಯ ಪರಿವಿಕ್ಷಕರಿಗೆ ಖಾಸಗಿ ಸ್ವತ್ತಿನವರು ಸರ್ಕಾರಿ ರಸ್ತೆಯಲ್ಲಿ ಗೇಟ್ ನಿರ್ಮಿಸಿದ್ದರೆ ಅದನ್ನು ಈ ಕೂಡಲೇ

ತೆರವುಗೋಳಿಸಬೇಕೆಂದು ಸೂಚಿಸಿದರು. ಕಿರಿಯ ಆರೋಗ್ಯ ಪರಿವೀಕ್ಷಕರು ಮಾತನಾಡಿ ಸಮಸ್ಯೆಯನ್ನು ಬಗೆಹರಿಸುವುದಾಗಿ ಸಭೆಗೆ ತಿಳಿಸಿದರು. ಕಂದಾಯ ಪರಿವಿಕ್ಷಕರು ಮಾತನಾಡಿ ಸೂಕ್ತ ಕ್ರಮ ಕೈಗೊಳ್ಳುವುದಾಗಿ ಸಭೆಗೆ ತಿಳಿಸಿದರು. ಹಿರಿಯ ಆರೋಗ್ಯ ಪರಿವೀಕ್ಷಕರು ಮಾತನಾಡಿ ಹಾಪ್‌ಕಾಮ್ಸ್ ಸ್ಥಳ ಪರೀಶಿಲಿಸಿ ನೋಟೀಸನ್ನು ಜಾರಿ ಮಾಡುವುದಾಗಿ ಸಭೆಗೆ ತಿಳಿಸಿದರು.

ಅಂತಿಮವಾಗಿ ನೋಡಲ್ ಅಧಿಕಾರಿಯವರು ಈ ಮೇಲ್ಕಂಡ ಅಂಶಗಳ ಬಗ್ಗೆ ವಿವರವಾಗಿ ಅಧಿಕಾರಿಗಳಿಗೆ ನಿರ್ದೇಶನ ನೀಡಿ, ಸಭೆಯಲ್ಲಿ ಉಪಸ್ಥಿತರಿದ್ದ ಅಧಿಕಾರಿಗಳೊಂದಿಗೆ ಕೂಲಂಕುಶವಾಗಿ ಚರ್ಚಿಸಿದ್ದು, ಸದರಿ ವಿಷಯಗಳ ಬಗ್ಗೆ ಕ್ರಮಕೈಗೊಳ್ಳಲು ಸೂಚಿಸಿದರು ನಂತರ ವಂದನಾರ್ಪಣೆಯೊಂದಿಗೆ ಸಭೆಯನ್ನು ಮುಕ್ತಾಯ ಗೊಳಿಸಲಾಯಿತು.

(ಪ್ರವೀಣ್ ಎ.ಆರ್.)
ಕಾರ್ಯದರ್ಶಿಗಳು ಮತ್ತು
ಕಿರಿಯ ಅಭಿಯಂತರರು
ವಾರ್ಡ್ 8, ಕೊಡಿಗೇಹಳ್ಳಿ ಉಪ ವಿಭಾಗ

ನೋಡಲ್ ಅಧಿಕಾರಿ ಹಾಗೂ
ವಾರ್ಡ್ ಸಮಿತಿ ಅಧ್ಯಕ್ಷರು
ವಾರ್ಡ್ ಸಂಖ್ಯೆ:08

**ಪ್ರತಿಯನ್ನು:-**

1. ಮಾನ್ಯ ಆಡಳಿತ ಅಧಿಕಾರಿಗಳು, ಬಿಬಿಎಂಪಿ ರವರ ಅವಗಾಹನೆಗಾಗಿ ಸಲ್ಲಿಸಿದೆ.
2. ಮಾನ್ಯ ಆಯುಕ್ತರು, ಬಿಬಿಎಂಪಿ ರವರ ಅವಗಾಹನೆಗಾಗಿ ಸಲ್ಲಿಸಿದೆ.
3. ಮಾನ್ಯ ಜಂಟಿ ಆಯುಕ್ತರು, ಯಲಹಂಕ ವಲಯ, ಬಿಬಿಎಂಪಿ ರವರ ಅವಗಾಹನೆಗಾಗಿ ಸಲ್ಲಿಸಿದೆ.
4. ಆರೋಗ್ಯಾಧಿಕಾರಿಗಳು, ಯಲಹಂಕ ವಲಯ, ಬಿಬಿಎಂಪಿ ರವರ ಮಾಹಿತಿಗಾಗಿ ಕಳುಹಿಸಿದೆ.
5. ಸಹಾಯಕ ಕಾರ್ಯಪಾಲಕ ಅಭಿಯಂತರರು, ಬೃಹ ತ್ ನೀರುಗಾಲುವೆ ರವರ ಮಾಹಿತಿಗಾಗಿ ಕಳುಹಿಸಿದೆ.
6. ಸಹಾಯಕ ಕಾರ್ಯಪಾಲಕ ಅಭಿಯಂತರರು, ಬೆಸ್ಕಾಂ ರವರಿಗೆ ಮಾಹಿತಿಗಾಗಿ ಹಾಗೂ ಸೂಕ್ತ ಕ್ರಮಕ್ಕಾಗಿ ಕಳುಹಿಸಿದೆ.
7. ಸಹಾಯಕ ಕಾರ್ಯಪಾಲಕ ಅಭಿಯಂತರರು, ಕೊಡಿಗೇಹಳ್ಳಿ ಉಪವಿಭಾಗ, ಬಿಬಿಎಂಪಿ ರವರ ಮಾಹಿತಿಗಾಗಿ ಕಳುಹಿಸಿದೆ.
8. ಸಹಾಯಕ ಕಾರ್ಯಪಾಲಕ ಅಭಿಯಂತರರು, ಘನತ್ಯಾಜ್ಯ ವಿಭಾಗ, ಬಿಬಿಎಂಪಿ ರವರ ಮಾಹಿತಿಗಾಗಿ ಕಳುಹಿಸಿದೆ.
9. ಕಾರ್ಯದರ್ಶಿ ಹಾಗೂ ಸಂಚಾಲಕರು, ವಾರ್ಡ್ ಕಮಿಟಿ ರವರ ಮಾಹಿತಿಗಾಗಿ ಕಳುಹಿಸಿದೆ.
10. ವಾರ್ಡ್ ಕಮಿಟಿ ಸದಸ್ಯರುಗಳ ಮಾಹಿತಿಗಾಗಿ ಕಳುಹಿಸಿದೆ.
11. ಕಛೇರಿ ಕಡತಕ್ಕೆ.